## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಚನ್ನಪಟ್ಟಣ ತಾಲ್ಲೂಕಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಬೇಕಾಗಿದ್ದ ನಾಲ್ಕು ಕುಡಿಯುವ ನೀರಿನ ಕಾಮಗಾರಿಗಳನ್ನು ಪೂರ್ಣಗೊಳಿಸದೆ ಪೂರ್ಣ ಹಣವನ್ನು ಗುತ್ತಿಗೆದಾರರಿಗೆ ಪಾವತಿಸಿ ಹಣ ದುರುಪಯೋಗ ಪಡಿಸಿಕೊಂಡಿರುವ ಆರೋಪಗಳ ಕುರಿತು ವಿವರವಾದ ಇಲಾಖಾ ವಿಚಾರಣೆ- ವಿಚಾರಣಾಧಿಕಾರಿಯವರನ್ನು ಬದಲಾಯಿಸುವ ಬಗ್ಗೆ -ಆದೇಶ.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 87 ಇಎನ್‌ಕ್ಯೂ 2017, ದಿನಾಂಕ:13.11.2018.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 87 ಇಎನ್‌ಕ್ಯೂ 2017, ದಿನಾಂಕ:28.06.2019
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 87 ಇಎನ್‌ಕ್ಯೂ 2017, ದಿನಾಂಕ:20.12.2019
4. ಶ್ರೀ ಆರ್.ಎಸ್.ಪಾಟೀಲ್, ವಿಚಾರಣಾಧಿಕಾರಿಗಳು ಇವರ ಮನವಿ ದಿನಾಂಕ:04.06.2020.

ಪ್ರಸ್ತಾವನೆ:-

ಚನ್ನಪಟ್ಟಣ ತಾಲ್ಲೂಕು ತಗಚಗೆರೆ, ರಾಂಪುರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಎನ್.ಆರ್.ಕಾಲೋನಿ, ಯಲಚೇಪಾಳ್ಯ, ಅಪ್ಪಗೆರೆ, ಹಾಗೂ ಹರೀಸಂದ್ರ ಗ್ರಾಮಗಳಲ್ಲಿನ ನಾಲ್ಕು ಕೊಳವೆ ನೀರು ಸರಬರಾಜು ಯೋಜನೆ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರು ಗುತ್ತಿಗೆದಾರರಿಗೆ ಪೂರ್ಣ ಹಣವನ್ನು ಪಾವತಿಸಲಾಗಿದೆ ಎಂಬ ಆರೋಪಗಳ ಕುರಿತು ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ನಿವೃತ್ತ ಪ್ರಧಾನ ಹಾಗೂ ಜಿಲ್ಲಾ ಸತ್ರ ನ್ಯಾಯಾಧೀಶರಾದ ಶ್ರೀ ಅವಿನ್ ತಿಪ್ಪಣ್ಣ ಹನಮಪ್ಪ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಶ್ರೀ ಎಂ.ಎಸ್.ಬಾಲಕೃಷ್ಣ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:13.11.2018 ರ ಆದೇಶದಲ್ಲಿ ನೇಮಕ ಮಾಡಲಾಗಿತ್ತು.

1. ಶ್ರೀ ಎಸ್.ನಾಗರಾಜ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಮನಗರ. (ಹಾಲಿ ನಿವೃತ್ತ).
2. ಶ್ರೀ ಕೆ.ಎಂ.ದೇವನಾಥ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಚನ್ನಪಟ್ಟಣ. (ಹಾಲಿ ನಿವೃತ್ತ).
3. ಶ್ರೀ ಚಿಕ್ಕವೆಂಕಟೇಶ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಚನ್ನಪಟ್ಟಣ.

ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:28.06.2019 ರಲ್ಲಿ ವಿಚಾರಣಾಧಿಕಾರಿಯವರನ್ನು ಬದಲಾಯಿಸಿ, ಶ್ರೀ ಆರ್.ಎಸ್.ಪಾಟೀಲ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿತ್ತು.

ಈ ಪ್ರಕರಣದಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದ ಶ್ರೀ ಎಂ.ಎಸ್.ಬಾಲಕೃಷ್ಣ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ವರ್ಗಾವಣೆಗೊಂಡಿದ್ದರಿಂದ ಇವರ ಜಾಗಕ್ಕೆ ನೇಮಿಸಲಾಗಿದ್ದ ಶ್ರೀಮತಿ ಎಂ.ಸಿ.ಸುರಭಿ ಇವರನ್ನು ಮಂಡನಾಧಿಕಾರಿಯನ್ನಾಗಿ ಮೇಲೆ ಓದಲಾದ ಕ್ರಮಾಂಕ(3) ರ ದಿನಾಂಕ:20.12.2019 ರಲ್ಲಿ ನೇಮಕ ಮಾಡಲಾಗಿತ್ತು.

ಈ ಪ್ರಕರಣದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದ ಶ್ರೀ ಆರ್.ಎಸ್.ಪಾಟೀಲ್ ರವರು ಮೇಲೆ ಓದಲಾದ ಕ್ರಮಾಂಕ(4) ರ ದಿನಾಂಕ:04.06.2020 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿ ವೈಯಕ್ತಿಕ ಕಾರಣದಿಂದಾಗಿ ವಿಚಾರಣೆಯನ್ನು ನಡೆಸಲು ತಮ್ಮಿಂದ ಸಾಧ್ಯವಾಗುತ್ತಿಲ್ಲವೆಂದು, ತಮ್ಮನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಿದ ಆದೇಶವನ್ನು ಹಿಂಪಡೆದು ಬೇರೆ ವಿಚಾರಣಾಧಿಕಾರಿಯನ್ನು ನೇಮಕ ಮಾಡುವಂತೆ ಕೋರಿರುತ್ತಾರೆ. ಆದ್ದರಿಂದ ಈ ಪ್ರಕರಣದಲ್ಲಿ ವಿಚಾರಣಾಧಿಕಾರಿಯನ್ನು ಬದಲಾಯಿಸುವುದು ಸೂಕ್ತವೆಂದು ನಿರ್ಣಯಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ: ಗ್ರಾಅಪ 87 ಇಎನ್‌ಕ್ಯೂ 2017, ಬೆಂಗಳೂರು, ದಿನಾಂಕ:24.06.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಪ್ರಸಕ್ತ ಪ್ರಕರಣದಲ್ಲಿ ಆರೋಪಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:28.06.2019 ರ ಆದೇಶದಲ್ಲಿ ಶ್ರೀ ಆರ್.ಎಸ್.ಪಾಟೀಲ್, ನಿವೃತ್ತ ಜಿಲ್ಲಾ ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯವರನ್ನಾಗಿ ನೇಮಿಸಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಜಂಟಿ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ಮತ್ತು 13 ರ ಅನುಸಾರ ನಡೆಸಲು ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶಿಸಿದೆ.

1. ಶ್ರೀ ಎಸ್.ನಾಗರಾಜ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಮನಗರ. (ಹಾಲಿ ನಿವೃತ್ತ).
2. ಶ್ರೀ ಕೆ.ಎಂ.ದೇವನಾಥ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಚನ್ನಪಟ್ಟಣ. (ಹಾಲಿ ನಿವೃತ್ತ).
3. ಶ್ರೀ ಚಿಕ್ಕವೆಂಕಟೇಶ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಚನ್ನಪಟ್ಟಣ.

ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು. ವಿಚಾರಣಾ ವರದಿ ಸ್ವೀಕೃತವಾದ ನಂತರ ವಿಚಾರಣಾಧಿಕಾರಿಯವರು ನಿಯಮಾನುಸಾರ ಸಂಭಾವನೆ ಪಡೆಯಲು ಅರ್ಹರಿರುತ್ತಾರೆ.

ಶ್ರೀ ಎಂ.ಸಿ.ಸುರಭಿ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಮಂಡನಾಧಿಕಾರಿಯಾಗಿ ಮುಂದುವರಿಯಲಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/6/2020
(ಶರಣಬಸಪ್ಪ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು–ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

24/6/2020

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು

5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
9. ಶ್ರೀ ಹೆಚ್.ಎಸ್.ರಾಮಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.245, 8 ನೇ ಮುಖ್ಯ ರಸ್ತೆ, ನ್ಯಾಯಾಂಗ ಬಡಾವಣೆ, 2 ನೇ ಹಂತ, ಶಿವನಗರ, ತಲಘಟ್ಟಪುರ, ಬೆಂಗಳೂರು-560062. ಮೊ.ಸಂ:9739370777(ಇವರಿಗೆ ಮುಖಪುಟ ಪತ್ರದೊಂದಿಗೆ)
10. ಶ್ರೀ ರುದ್ರಗೌಡ ಎಸ್.ಪಾಟೀಲ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.761,14 ನೇ ಮುಖ್ಯ ರಸ್ತೆ, 26 ನೇ ಕ್ರಾಸ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ ಜಿ.ಕೆ.ವಿ.ಕೆ. ಅಂಚೆ, ಯಲಹಂಕ, ಬೆಂಗಳೂರು.
11. ಶ್ರೀಮತಿ ಸುರಭಿ ಎಂ.ಸಿ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
12. ಸಂಬಂಧಿಸಿದ ಅಧಿಕಾರಿಗಳಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಇವರ ಮುಖಾಂತರ)
13. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
14. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
15. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.